## ಹಿಂದುಳಿದ ವರ್ಗದ ಅಭಿವೃದ್ಧಿ ನಿಗಮ

**408(1058); ಶ್ರೀ ಅರವಿಂದ ಲಿಂಬಾವಳಿ**

ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ರಚಿಸಲಾಗಿದೆಯೇ;

ಆ) ರಚಿಸಿದ್ದಲ್ಲಿ ನಿಗಮವು ಯಾವ ದಿನಾಂಕದಿಂದ ಅನುಷ್ಠಾನಗೊಳಿಸಲಾಗುವುದು;

ಇ) ನಿಗಮದಲ್ಲಿ ಅವಕಾಶವಿರುವ ಸೌಲಭ್ಯಗಳೇನು; (ಪೂರ್ಣ ವಿವರ ನೀಡುವುದು)

**ಶ್ರೀ ಹೆಚ್. ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)**

ಅ) ಹೌದು, ರಚಿಸಲಾಗಿದೆ.

ಆ) ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮವನ್ನು ದಿನಾಂಕ:28.10.1977 ರಂದು ಅನುಷ್ಠಾನಗೊಳಿಸಲಾಗಿದೆ.

ಇ) ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಲ್ಲಿ ಹಿಂದುಳಿದ ವರ್ಗಗಳ ಆರ್ಥಿಕಾಭಿವೃದ್ಧಿಗಾಗಿ ಅವಕಾಶವಿರುವ ಸೌಲಭ್ಯಗಳ ಪೂರ್ಣ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

# ಅನುಬಂಧ-1

ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಅರವಿಂದ ಲಿಂಬಾವಳಿ(ಮಹದೇವಪುರ ವಿಧಾನಸಭಾ ಕ್ಷೇತ್ರ)
ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ-1058ಕ್ಕೆ ನಿಗಮದ ಉತ್ತರಕ್ಕೆ ಅನುಬಂಧ-1

| ಯೋಜನೆ ಹೆಸರು ಮತ್ತು ನೀಡುತ್ತಿರುವ ಸೌಲಭ್ಯದ ವಿವರ |
|---|
| 1. ಚೈತನ್ಯ ಸಬ್ಸಿಡಿ ಕಂ ಸಾಫ್ಟ್ ಲೋನ್ ಯೋಜನೆ |
| ಈ ಯೋಜನೆಯನ್ನು ಬ್ಯಾಂಕ್‌ಗಳ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ. ಹಿಂದುಳಿದ ವರ್ಗಗಳ ಜನರು ಕೈಗೊಳ್ಳುವ ವ್ಯಾಪಾರ, ಸಣ್ಣ ಕೈಗಾರಿಕೆ, ಕೃಷಿ ಮತ್ತು ಕೃಷಿ ಅವಲಂಬಿತ ಹಾಗೂ ಸೇವಾ ವಲಯದಲ್ಲಿ ಬರುವ ಚಟುವಟಿಕೆಗಳನ್ನು ಕೈಗೊಳ್ಳಲು ಘಟಕ ವೆಚ್ಚ ರೂ.5.00ಲಕ್ಷಗಳ ವರೆಗೆ ಆರ್ಥಿಕ ನೆರವು ಒದಗಿಸುವುದು. ಘಟಕ ವೆಚ್ಚ ರೂ.25000/-ಗಳ ವರೆಗೆ ಶೇ.30ರಷ್ಟು ಸಹಾಯಧನ ಹಾಗೂ ರೂ.25001/- ರಿಂದ ರೂ.1.00ಲಕ್ಷಗಳ ವರೆಗೆ ಗರಿಷ್ಠ ರೂ.10000/-ಗಳ ಸಹಾಯಧನವನ್ನು ಮತ್ತು ಶೇ.20ರಷ್ಟು ಮಾರ್ಜಿನ್ ಹಣ ಹಾಗೂ ರೂ. 1,00,001/- ರಿಂದ ರೂ.5.00ಲಕ್ಷಗಳ ವರೆಗೆ ಸಾಲಕ್ಕೆ ಶೇ.20ರಷ್ಟು ಗರಿಷ್ಠ ರೂ.1.00ಲಕ್ಷಗಳ ಮಾರ್ಜಿನ್ ಹಣವನ್ನು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಮಂಜೂರು ಮಾಡಲಾಗುವುದು. ಉಳಿಕೆ ಮೊತ್ತ ಬ್ಯಾಂಕ್ ಪಾಲಿನ ಮೊತ್ತವಾಗಿರುತ್ತದೆ. |
| 2. ಚೈತನ್ಯ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ |
| ಈ ಯೋಜನೆಯಲ್ಲಿ ಬ್ಯಾಂಕ್‌ಗಳ ಮೂಲಕ ಸಾಲ ಪಡೆಯಲು ಅಶಕ್ತರಾಗಿರುವ ಹಿಂದುಳಿದ ವರ್ಗಗಳ ಜನರು ಸ್ವಯಂ ಉದ್ಯೋಗಕ್ಕೆ ಕೈಗೊಳ್ಳುವ ಆರ್ಥಿಕ ಚಟುವಟಿಕೆಗನುಸಾರ ಗರಿಷ್ಠ 50,000/-ರೂ.ಗಳವರೆಗೆ ಸಾಲ/ಸಹಾಯಧನ ಒದಗಿಸಲಾಗುವುದು ಇದರಲ್ಲಿ ಶೇ.30ರಷ್ಟು ಗರಿಷ್ಠ ರೂ.10,000/- ಸಹಾಯಧನ ಹಾಗೂ ಉಳಿಕೆ ಮೊತ್ತ ರೂ.40000/-ಗಳನ್ನು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಸಾಲವಾಗಿ ಮಂಜೂರು ಮಾಡಲಾಗುವುದು. |
| 3. ಕಿರು ಸಾಲ ಸಾಲ ಯೋಜನೆ |
| ಹಿಂದುಳಿದ ವರ್ಗಗಳಿಗೆ ಸೇರಿದ ಕುಶಲಿ ಹಾಗೂ ಕುಶಲಿ ಅಲ್ಲದ ಅರ್ಜಿದಾರರು ಕೈಗೊಳ್ಳುವ ಸಣ್ಣ ವ್ಯಾಪಾರ ಚಟುವಟಿಕೆಗಳಾದ ಹಾಲು ವ್ಯಾಪಾರ, ಹಣ್ಣು ಮತ್ತು ತರಕಾರಿ ವ್ಯಾಪಾರ, ಟೀಸ್ಟಾಲ್, ಹೂವಿನ ವ್ಯಾಪಾರ ಮುಂತಾದವುಗಳನ್ನು ಕೈಗೊಳ್ಳಲು ಪ್ರತಿ ಫಲಾನುಭವಿಗಳಿಗೆ 5,000/-ರೂ.ಗಳ ಸಹಾಯಧನ ಹಾಗೂ ಶೇ.5ರ ಬಡ್ಡಿದರದಲ್ಲಿ 10,000/-ರೂ.ಗಳ ಸಾಲ, ಹೀಗೆ ಒಟ್ಟು 15,000/-ರೂ.ಗಳಂತೆ, ಸ್ವಸಹಾಯ ಗುಂಪುಗಳ ಮೂಲಕ ಮಂಜೂರು ಮಾಡಲಾಗುವುದು. |

| 4. ವಿದೇಶಿ ವಿಶ್ವವಿದ್ಯಾಲಯದಲ್ಲಿ ಉನ್ನತ ವ್ಯಾಸಂಗಕ್ಕೆ ಬಡ್ಡಿ ರಹಿತ ಸಾಲ ಯೋಜನೆ |
|---|
| ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಪಿ.ಹೆಚ್.ಡಿ., ಪೋಸ್ಟ್ ಡಾಕ್ಟರಲ್ ಮತ್ತು ಮಾಸ್ಟರ್ ಡಿಗ್ರಿ ವ್ಯಾಸಂಗಕ್ಕೆ ಪ್ರವೇಶ ಹೊಂದಿದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಾರ್ಷಿಕ ಗರಿಷ್ಠ ರೂ.3.50ಲಕ್ಷಗಳಂತೆ 3 ವರ್ಷದ ಅವಧಿಗೆ ಗರಿಷ್ಠ ರೂ.10.00ಲಕ್ಷಗಳ ಬಡ್ಡಿ ರಹಿತ ಸಾಲ ಮಂಜೂರು ಮಾಡಲಾಗುವುದು. |
| 5. ಸಾಂಪ್ರದಾಯಿಕ ವೃತ್ತಿದಾರರ ಹಾಗೂ ಕುಶಲ ಕರ್ಮಿಗಳ ಸಾಲ ಯೋಜನೆ |
| ಹಿಂದುಳಿದ ವರ್ಗಗಳಿಗೆ ಸೇರಿದ ಸಾಂಪ್ರದಾಯಿಕ ವೃತ್ತಿ ಮತ್ತು ಕುಶಲ ಕರ್ಮಿಗಳಿಗೆ ಅವರು ವೃತ್ತಿ ಸಾಂಪ್ರದಾಯಿಕ ವೃತ್ತಿ ಮತ್ತು ಕುಶಲಕರ್ಮಿಗಳಿಗೆ ಅವರ ವೃತ್ತಿ ಕೌಶಲ್ಯತೆಯನ್ನು ಅಭಿವೃದ್ಧಿ ಪಡಿಸಿಕೊಳ್ಳಲು ರೂ.5,000/-ಗಳ ಸಹಾಯಧನ ಹಾಗೂ ರೂ.45,000/-ಗಳ ಸಾಲವನ್ನು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಮಂಜೂರು ಮಾಡಲಾಗುವುದು. |
| 6. ಕುಂಬಾರಿಕೆ ಅಭಿವೃದ್ಧಿ ಯೋಜನೆ |
| ಕುಂಬಾರಿಕೆ ಅಭಿವೃದ್ಧಿಗಾಗಿ ಉತ್ಪನ್ನಗಳ ತಯಾರಿಕೆಗೆ ಅವಶ್ಯವಿರುವ ಆಧುನಿಕ ಉಪಕರಣಗಳನ್ನು ಕೊಳ್ಳಲು ಹಾಗೂ ದುಡಿಮೆ ಬಂಡವಾಳಕ್ಕಾಗಿ ರೂ.5000/-ಗಳ ಸಹಾಯಧನ ಹಾಗೂ ರೂ.25000/-ಗಳ ಸಾಲ ವಾರ್ಷಿಕ ಬಡ್ಡಿ ದರದಲ್ಲಿ ಮಂಜೂರು ಮಾಡಲಾಗುವುದು. |
| 7. ಕುರಿ ಸಾಕಾಣಿಕೆ/ಕಂಬಳಿ ನೇಕಾರಿಕೆಗೆ ಪ್ರವರ್ಗ-1 ಮತ್ತು 2ಎಗೆ ಸೇರಿದವರಿಗೆ ಸಾಲ ಮತ್ತು ಸಹಾಯಧನ ನೆರವು ಯೋಜನೆ |
| ಹಿಂದುಳಿದ ವರ್ಗಗಳ ಪ್ರವರ್ಗ-1 ಮತ್ತು 2ಎಗೆ ಸೇರಿದವರು ಕುರಿ ಸಾಕಾಣಿಕೆ/ಕಂಬಳಿ ನೇಕಾರಿಗೆ ವೃತ್ತಿ ಮಾಡಲು ಗರಿಷ್ಟ ರೂ.10000/-ಗಳ ಸಹಾಯಧನ ಹಾಗೂ ರೂ.90000/-ಗಳ ಸಾಲ ವಾರ್ಷಿಕ ಶೇ.4ರ ಬಡ್ಡಿದರದಲ್ಲಿ. |
| 8. ಅರಿವು-ಶೈಕ್ಷಣಿಕ ಸಾಲ ಯೋಜನೆ |
| ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿಗೆ ಸೇರಿದ್ದು, ಕುಟುಂಬದ ವಾರ್ಷಿಕ ಆದಾಯ ರೂ.3.50ಲಕ್ಷಗಳ ಮಿತಿಯಲ್ಲಿದ್ದು, ಸಾಮಾನ್ಯ ಪ್ರವೇಶ ಪರೀಕ್ಷೆ ಮೂಲಕ(ಸಿ.ಇ.ಟಿ.) ಪ್ರವೇಶ ಪಡೆದು ವೃತ್ತಿಪರ ಉನ್ನತ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಾರ್ಷಿಕ ಶೇ.2ರ ಬಡ್ಡಿದರದಲ್ಲಿ ವಾರ್ಷಿಕ ಗರಿಷ್ಠ ರೂ.1.00ಲಕ್ಷಗಳ ವರೆಗೆ ಸಾಲ ಸೌಲಭ್ಯ ಮಂಜೂರು ಮಾಡಲಾಗುವುದು. |

| 9. ಗಂಗಾ ಕಲ್ಯಾಣ ನೀರಾವರಿ ಯೋಜನೆ |
| --- |
| ಹಿಂದುಳಿದ ವರ್ಗಕ್ಕೆ ಸೇರಿದ ಸಣ್ಣ ಮತ್ತು ಅತಿ ಸಣ್ಣ ರೈತರ ಜಮೀನುಗಳಿಗೆ ವೈಯಕ್ತಿಕ ನೀರಾವರಿ ಕೊಳವೆ ಬಾವಿ ಯೋಜನೆಯನ್ನು ಘಟಕ ವೆಚ್ಚ ರೂ.2.00ಲಕ್ಷಗಳಲ್ಲಿ (ರೂ.1.50ಲಕ್ಷಗಳ ಸಹಾಯಧನ ಹಾಗೂ ರೂ.50000/-ಗಳ ಸಾಲ ವಾರ್ಷಿಕ ಶೇ.4ರ ಬಡ್ಡಿದರದಲ್ಲಿ) ಹಾಗೂ ಸಾಮೂಹಿಕ ನೀರಾವರಿ ಯೋಜನೆಯಲ್ಲಿ ಕನಿಷ್ಟ 3 ಜನರು ಹೊಂದಿರುವ ಕನಿಷ್ಠ 8 ಎಕರೆಯಿಂದ 15 ಎಕರೆ ಜಮೀನಿಗೆ 2 ಕೊಳವೆಬಾವಿಯನ್ನು ಹಾಗೂ 15 ಎಕರೆ ಮೇಲ್ಪಟ್ಟ ಘಟಕ್ಕೆ 3 ಕೊಳವೆ ಬಾವಿಗಳನ್ನು ಕ್ರಮವಾಗಿ ರೂ.2.53ಲಕ್ಷಗಳು ಹಾಗೂ ರೂ.3.59ಲಕ್ಷಗಳ ವೆಚ್ಚದಲ್ಲಿ ನೀರಾವರಿ ಸೌಲಭ್ಯ ಒದಗಿಸಲಾಗುವುದು. ವಿದ್ಯುದ್ದೀಕರಣಕ್ಕೆ ಪ್ರತಿ ಕೊಳವೆ ಬಾವಿಗೆ ರೂ.50000/-ಗಳಂತೆ ವಿದ್ಯುತ್ ಸರಬರಾಜು ಕಂಪನಿಗಳಿಗೆ ಪಾವತಿಸಲಾಗುವುದು. |
| 10. ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಭೂ ಖರೀದಿ ಯೋಜನೆ. |
| ಅಲೆಮಾರಿ/ಅರೆ ಅಲೆಮಾರಿ ಜನಾಂಗಕ್ಕೆ ಸೇರಿದ ಕನಿಷ್ಠ 1 ಎಕರೆ ತರಿ ಭೂಮಿ ಅಥವಾ 2 ಎಕರೆ ಖುಷ್ಕಿ ಜಮೀನನ್ನು ಕೊಂಡುಕೊಳ್ಳಲು ಸಾಲ ಮತ್ತು ಸಹಾಯಧನ ಒದಗಿಸಲಾಗುವುದು. ಘಟಕ ವೆಚ್ಚ ರೂ.10.00ಲಕ್ಷಗಳನ್ನು ನಿಗದಿಪಡಿಸಿದೆ. ಈ ಮೊತ್ತದಲ್ಲಿ ಶೇ.50ರಷ್ಟು ಸಹಾಯಧನ ಹಾಗೂ ಉಳಿಕೆ ಶೇ.50ರಷ್ಟು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಸಾಲ ಮಂಜೂರು ಮಾಡಲಾಗುವುದು |
| 11. ರಾಷ್ಟ್ರೀಯ ಹಿಂದುಳಿದ ವರ್ಗಗಳ ಹಣಕಾಸು ಮತ್ತು ಅಭಿವೃದ್ಧಿ ನಿಗಮದ ಯೋಜನೆಗಳು |
| ರಾಷ್ಟ್ರೀಯ ಹಿಂದುಳಿದ ವರ್ಗಗಳ ಹಣಕಾಸು ಮತ್ತು ಅಭಿವೃದ್ಧಿ ನಿಗಮದಿಂದ ರಿಯಾಯಿತಿ ಬಡ್ಡಿದರದಲ್ಲಿ ಸಾಲವನ್ನು ಪಡೆದು ಹಿಂದುಳಿದ ವರ್ಗಗಳ ಜನರಿಗೆ ಕೃಷಿ ಅವಲಂಬಿತ ಚಟುವಟಿಕೆಗಳಿಗೆ, ಸಣ್ಣ ವ್ಯಾಪಾರ, ಸಾರಿಗೆ ವಲಯ, ಶೈಕ್ಷಣಿಕ ಸಾಲ, ಸೇವಾ ವಲಯ, ಸ್ವಯಂ ಸಕ್ಷಮ ಹಾಗೂ ನ್ಯೂ ಸ್ವರ್ಣಿಮಾ, ಶಿಲ್ಪ ಸಂಪದ, ಕೃಷಿ ಸಂಪದ ಕಾರ್ಯಕ್ರಮಗಳಲ್ಲಿ ಆಯಾ ಉದ್ದೇಶಗಳಿಗೆ ಅನುಗುಣವಾಗಿ ಗರಿಷ್ಠ ರೂ.10.00ಲಕ್ಷಗಳ ವರೆಗೆ ಶೇಕಡ 5 ರಿಂದ 6ರ ಬಡ್ಡಿದರದಲ್ಲಿ ಸಾಲ ಸೌಲಭ್ಯ ಮಂಜೂರು ಮಾಡಲಾಗುವುದು ಹಾಗೂ ಮಹಿಳೆಯ ಸಬಲೀಕರಣಕ್ಕಾಗಿ ಮಹಿಳಾ ಸ್ವಯ ಸಹಾಯ ಗುಂಪುಗಳ ಮೂಲಕ ಪ್ರತಿ ಫಲಾನುಭವಿಗೆ ಗರಿಷ್ಠ ರೂ.35000/-ಗಳಂತೆ ಒಂದು ಗುಂಪಿಗೆ ರೂ.3.50ಲಕ್ಷಗಳ ವರೆಗೆ ವಾರ್ಷಿಕ ಶೇ.5ರ ಬಡ್ಡಿದರದಲ್ಲಿ ಮಂಜೂರು ಮಾಡಲಾಗುವುದು. |

ವ್ಯವಸ್ಥಾಪಕ ನಿರ್ದೇಶಕರು.